ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2020-21 / 491

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560 001.
ದಿನಾಂಕ: 07-11-2020.

**ಹಿಂಬರಹ**

ಕರ್ನಾಟಕ ಸರ್ಕಾರದ ಆದೇಶದ ಪತ್ರ ಸಂಖ್ಯೆ : ಆಇ 03 ಸನಿತಿ 2020 (ಇ) ಬೆಂಗಳೂರು ದಿನಾಂಕ: 15/10/2020 ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ.
3. ಆಯುಕ್ತರ ಆಪ್ತ ಶಾಖೆಗೆ
4. ನಿರ್ದೇಶಕರ ಆಪ್ತ ಶಾಖೆಗೆ
5. ಈ ನಿರ್ದೇಶನಾಲಯದ ಎಂ.ಎಸ್.ಸಿ (2) ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ
6. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

## ಕರ್ನಾಟಕ ಸರ್ಕಾರ

ವಿಷಯ: ಸರ್ಕಾರಿ ನೌಕರರು ಒಂದು ಬಾರಿಗೆ ಪಡೆಯಬಹುದಾದ ಗರಿಷ್ಠ ಸಾಂದರ್ಭಿಕ ರಜೆಯ ಮಿತಿಯನ್ನು ನಿರ್ಬಂಧಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂ.ಆಇ 16 ಎಸ್‌ಆರ್‌ವಿ 89, ದಿನಾಂಕ: 09-03-1989.
2. ಸರ್ಕಾರ ಅಧಿಸೂಚನೆ ಸಂ. ಸಿಆಸುಇ 02 ಹೆಚ್‌ಹೆಚ್‌ಎಲ್ 2019, ದಿನಾಂಕ: 13-06-2019

27A6
6/11/2020

-------

ಪ್ರಸ್ತಾವನೆ:-

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ಪ್ರತಿ ಕ್ಯಾಲೆಂಡರ್ ವರ್ಷದಲ್ಲಿ 15 ದಿವಸಗಳ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲು ಆದೇಶಿಸಲಾಗಿತ್ತು. ನಂತರ, ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ 15 ದಿವಸಗಳ ಸಾಂದರ್ಭಿಕ ರಜೆಯನ್ನು 10 ದಿವಸಗಳಿಗೆ ಇಳಿಸಿ ಆದೇಶಿಸಲಾಗಿದೆ.

EST-9
6/11/2020

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ಅನುಬಂಧ-ಬಿ ಯ ನಿಯಮ(1) ರನ್ವಯ 15 ದಿನಗಳ ಸಾಂದರ್ಭಿಕ ರಜೆ ಜಾರಿಯಲ್ಲಿದ್ದ ಸಂದರ್ಭದಲ್ಲಿ ಒಂದು ಬಾರಿಗೆ ಪಡೆಯಬಹುದಾದ ಗರಿಷ್ಠ ಸಾಂದರ್ಭಿಕ ರಜೆಯ ಮಿತಿಯನ್ನು 7 ದಿನಗಳಿಗೆ ಸೀಮಿತಗೊಳಿಸಿ, ಸಾರ್ವತ್ರಿಕ ರಜೆಯೊಂದಿಗೆ ಸಂಯೋಜಿಸಿದಾಗ ಈ ಅವಧಿಯನ್ನು 10 ದಿವಸಗಳಿಗೆ ನಿರ್ಬಂದಿಸಿ ಅವಕಾಶ ಕಲ್ಪಿಸಲಾಗಿತ್ತು. ಮೇಲೆ ಓದಲಾದ (2)ರ ಆದೇಶದಲ್ಲಿ ಸಾಂದರ್ಭಿಕ ರಜೆಯನ್ನು 10 ದಿವಸಗಳಿಗೆ ಇಳಿಸಿರುವ ಹಿನ್ನೆಲೆಯಲ್ಲಿ ಒಂದು ಬಾರಿಗೆ ಪಡೆಯಬಹುದಾದ ಗರಿಷ್ಠ ಸಾಂದರ್ಭಿಕ ರಜೆಯನ್ನು 5 ದಿನಗಳೆಂದು ನಿರ್ಬಂಧಿಸಲು ಹಾಗೂ ಸಾರ್ವತ್ರಿಕ ರಜೆಯೊಂದಿಗೆ ಸಂಯೋಜಿಸಿದಾಗ ಈ ಅವಧಿಯನ್ನು 8 ದಿವಸಗಳಿಗೆ ನಿರ್ಬಂದಿಸಿ ಅವಕಾಶ ಕಲ್ಪಿಸಲು ನಿರ್ಧರಿಸಲಾಗಿದೆ. ಆದ್ದರಿಂದ, ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರ ಅದೇಶ ಸಂಖ್ಯೆ: ಆಇ 03 ಸನಿತಿ 2020 (ಇ) ಬೆಂಗಳೂರು, ದಿನಾಂಕ: 15.10.2020**

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ಅನುಬಂಧ-ಬಿ ಯಲ್ಲಿನ ಸಾಂದರ್ಭಿಕ ರಜೆಯ ಮಂಜೂರಾತಿ ಬಗ್ಗೆ ಈ ಕೆಳಕಂಡಂತೆ ಓದಿಕೊಳ್ಳತಕ್ಕದ್ದು:

| ಕ್ರ.ಸಂ. | ಪ್ರಸ್ತುತ ಅನುಬಂಧ-ಬಿ ಯಲ್ಲಿರುವ ಅವಕಾಶ | ಈ ಕೆಳಕಂಡಂತೆ ಓದಿಕೊಳ್ಳತಕ್ಕದ್ದು |
|---|---|---|
| 1. | ಅನುಬಂಧ-ಬಿ ಯ ನಿಯಮ (1)ರಲ್ಲಿ ಪ್ರತಿ ಕ್ಯಾಲೆಂಡರ್ ವರ್ಷದಲ್ಲಿ 15 ದಿನಗಳ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಬಹುದು. ಆದರೆ ಒಂದು ಬಾರಿಗೆ 7 ದಿನಗಳಿಗಿಂತ ಹೆಚ್ಚಿಗೆ ರಜೆ ಮಂಜೂರು ಮಾಡತಕ್ಕದ್ದಲ್ಲ. | ಪ್ರತಿ ಕ್ಯಾಲೆಂಡರ್ ವರ್ಷದಲ್ಲಿ 10 ದಿನಗಳ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಬಹುದು. ಆದರೆ ಒಂದು ಬಾರಿಗೆ 5 ದಿನಗಳಿಗಿಂತ ಹೆಚ್ಚಿಗೆ ರಜೆ ಮಂಜೂರು ಮಾಡತಕ್ಕದ್ದಲ್ಲ. |

2....

| | | |
|---|---|---|
| 2. | ಅನುಬಂಧ-ಬಿ ಯ ನಿಯಮ (1) ರಲ್ಲಿನ ಟಿಪ್ಪಣಿಯಲ್ಲಿ ಬರುವ ಗೊತ್ತುಪಡಿಸಿದ 15 ದಿನಗಳ ಪರಿಮಿತಿಗೆ ಒಳಪಟ್ಟು | ಗೊತ್ತುಪಡಿಸಿದ 10 ದಿನಗಳ ಪರಿಮಿತಿಗೆ ಒಳಪಟ್ಟು |
| 3. | ಅನುಬಂಧ-ಬಿ ಯ ನಿಯಮ (2) ರಲ್ಲಿನ 'ಭಾನುವಾರ ಮತ್ತು ರಜಾ ದಿನಗಳನ್ನು ಬಿಟ್ಟು ಒಂದು ಗೈರು ಹಾಜರಿಯ ಅವಧಿಯಲ್ಲಿ ಏಳು ದಿನಗಳಿಗಿಂತ ಹೆಚ್ಚು ದಿನದ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡತಕ್ಕದ್ದಲ್ಲ. ಅಷ್ಟೇ ಅಲ್ಲದೆ, ಅಂಥ ಗೈರು ಹಾಜರಿಯ ಅವಧಿಯು ಯಾವ ಸಂದರ್ಭದಲ್ಲೂ ಹತ್ತು ದಿನಗಳಿಗೆ ಮೀರಬಾರದು'. | 'ಭಾನುವಾರ ಮತ್ತು ರಜಾ ದಿನಗಳನ್ನು ಬಿಟ್ಟು ಒಂದು ಗೈರು ಹಾಜರಿಯ ಅವಧಿಯಲ್ಲಿ ಐದು (5) ದಿನಗಳಿಗಿಂತ ಹೆಚ್ಚು ದಿನದ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡತಕ್ಕದ್ದಲ್ಲ. ಅಷ್ಟೇ ಅಲ್ಲದೆ, ಅಂಥ ಗೈರು ಹಾಜರಿಯ ಅವಧಿಯು ಯಾವ ಸಂದರ್ಭದಲ್ಲೂ ಎಂಟು (8) ದಿನಗಳಿಗೆ ಮೀರಬಾರದು. |
| 4. | ಅನುಬಂಧ-ಬಿ ಯ ನಿಯಮ (4) ರಲ್ಲಿ ಬರುವ 'ಒಂದು ಬಾರಿಗೆ 7 ದಿನಗಳ ಪರಿಮಿತಿಯು' | 'ಒಂದು ಬಾರಿಗೆ 5 ದಿನಗಳ ಪರಿಮಿತಿಯು' |

ಸಾಂದರ್ಭಿಕ ರಜೆಯ ಅರ್ಹತೆ ಮತ್ತು ಮಂಜೂರಾತಿ ಬಗ್ಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ಅನುಬಂಧ-ಬಿ ರಲ್ಲಿನ ಇತರೆ ಷರತ್ತುಗಳು ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಬಿ.ಹೇಮಣ್ಣ)
ಸರ್ಕಾರದ ಉಪ ಕಾರ್ಯದರ್ಶಿ-2
ಆರ್ಥಿಕ ಇಲಾಖೆ.

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಪ್ರಾದೇಶಿಕ ಆಯುಕ್ತರು.
4. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ. 5398) ಬೆಂಗಳೂರು.
7. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ.ನಂ.5398) ಬೆಂಗಳೂರು.

3….

8. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ. (ಪಿ.ಬಿ.ನಂ. 5329) ಬೆಂಗಳೂರು.
9. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
12. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
14. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145 "A" ಬಹುಮಹಡಿಗಳ ಕಟ್ಟಡ, ಬೆಂಗಳೂರು.
15. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
16. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳ/ರಿಜಿಸ್ಟ್ರಾರ್‌ಗಳು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ (ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಎಲ್ಲಾ ಶಾಖೆಗಳು.
22. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ / ವಿಧಾನ ಮಂಡಲದ ಗ್ರಂಥಾಲಯ.
23. ವಾರಪತ್ರ / ಶಾಖೆಯ ರಕ್ಷಾ ಕಡತ.